ಕ್ರ.ಸಂ. 1A.
149 ನೇ ಅಧಿವೇಶನ (8)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಎ. ತಿಪ್ಪೇಸ್ವಾಮಿ, ಬೆಂಗಳೂರು ಇವರು ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಲು ಕೋರಿರುವ ಬಗ್ಗೆ.**

**ವಿಷಯ:**

ಪಂಚತಂತ್ರ 2.0 ತಂತ್ರಾಂಶವನ್ನು ಉನ್ನತೀಕರಿಸಿ, ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ನಾಗರಿಕರಿಗೆ ಸೇವೆಗಳನ್ನು ಆನ್‌ಲೈನ್ ಮೂಲಕ ಒದಗಿಸಲು ಸರ್ಕಾರವು ಮುಂದಾಗಬೇಕೆಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸುವ ಕುರಿತು.

---

**ಉತ್ತರ:**

1) 2011 ರಿಂದ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಬಳಸಲಾಗುತ್ತಿದ್ದ ಮತ್ತು NIC ರವರಿಂದ ಅಭಿವೃದ್ಧಿಪಡಿಸಲಾದ "ಪಂಚತಂತ್ರ" ತಂತ್ರಾಂಶವನ್ನು ಉನ್ನತೀಕರಣಗೊಳಿಸಿ, ಪಂಚತಂತ್ರ ತಂತ್ರಾಂಶದ ಎರಡನೇ ಆವತರಣಿಕೆ "ಪಂಚತಂತ್ರ 2.0" ತಂತ್ರಾಂಶವನ್ನು ಅಭಿವೃದ್ಧಿಪಡಿಸಿ, ಹಂತವಾರು 24, ಏಪ್ರಿಲ್-2022 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ.
2) ಪಂಚತಂತ್ರ 2.0 ತಂತ್ರಾಂಶದಲ್ಲಿ ಪ್ರಸ್ತುತ 1.33 ಕೋಟಿ ಆಸ್ತಿಗಳಿದ್ದು, ಯಾವುದೇ ಆಸ್ತಿಗಳಿಗೆ ತೆರಿಗೆ ಪಾವತಿಸಲು ಯಾವುದೇ ಅಡೆತಡೆ ಇರುವುದಿಲ್ಲ. ಪ್ರತ್ಯೇಕವಾಗಿ ಇ-ಖಾತೆಯನ್ನು ಪಡೆದ ಆಸ್ತಿಗಳಿಗೆ ತೆರಿಗೆ ಪಾವತಿಸಲು ಯಾವುದೇ ನಿಬಂಧನೆ ಇರುವುದಿಲ್ಲ.
3) ತೆರಿಗೆ ಪಾವತಿಸುವ ಪ್ರಕ್ರಿಯೆಯನ್ನು ಸುಲಭಗೊಳಿಸುವ ನಿಟ್ಟಿನಲ್ಲಿ ಆನ್‌ಲೈನ್ ಮೂಲಕ ತೆರಿಗೆ ಪಾವತಿಸಲು ಸಾರ್ವಜನಿಕರಿಗೆ ಅನುವು ಮಾಡಿಕೊಡಲಾಗಿದೆ.
4) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಒಟ್ಟು 17 ಸೇವೆಗಳನ್ನು ಸಾರ್ವಜನಿಕರಿಗೆ ಒದಗಿಸುತ್ತಿರುವುದು ಅನುಕೂಲವಾಗಿರುತ್ತದೆ. ಸದರಿ ಸೇವೆಗಳನ್ನು ಸಕಾಲ ಅಧಿನಿಯಮದಡಿ ತರಲಾಗಿದೆ.
5) ಪಂಚತಂತ್ರ ತಂತ್ರಾಂಶವನ್ನು ಉನ್ನತೀಕರಣಗೊಳಿಸಿ, ಪಂಚತಂತ್ರ 2.0 ತಂತ್ರಾಂಶವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಾಗರಿಕ ಸೇವೆಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಪಂಚತಂತ್ರ 2.0 ತಂತ್ರಾಂಶವನ್ನು ಕಾಲ ಕಾಲಕ್ಕೆ upgrade ಮಾಡಲಾಗುತ್ತಿದೆ.

ಸಂ: ಗ್ರಾಅಪ/43/ಇ-ಆಡಳಿತ/2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ